MARCH 06, 2026

## AKASHAVANI - DHARWAD

## PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯದ 2026-27 ನೇ ಸಾಲಿನ ಆಯವ್ಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು,** ಇಂದು ವಿಧಾನಮಂಡಲದಲ್ಲಿ ಮಂಡಿಸುತ್ತಿದ್ದು, ಪ್ರಸ್ತುತ ಬಜೆಟ್ ಭಾಷಣ ಮುಂದುವರಿದಿದೆ. ಪ್ರಗತಿ ಶೀಲ ರಾಜ್ಯದ ಜನರ ತೆರಿಗೆ ಹಣದ ಪ್ರಮುಖ ವಿಶ್ವಸ್ಥರಾಗಿರುವ ತಾವು ಜನರ ಏಳಿಗೆಯನ್ನು ಬಯಸಿ, 17 ನೇ ಬಜೆಟ್ ಮಂಡಿಸುತ್ತಿರುವುದಾಗಿ ತಿಳಿಸಿದ ಮುಖ್ಯಮಂತ್ರಿಯವರು, ನಾಡಿನ ಏಳು ಕೋಟಿ ಕನ್ನಡಿಗರ ನಿರೀಕ್ಷೆಗಳಿಗೆ ತಕ್ಕಂತೆ, ಅವರ ಕನಸುಗಳನ್ನು, ನನಸು ಮಾಡುವ ನಿಟ್ಟಿನಲ್ಲಿ ಸರ್ಕಾರ ಬದ್ಧತೆಯಿಂದ ಕಾರ್ಯನಿರ್ವಹಿಸುತ್ತಿದೆ ಎಂದರು. ಕರ್ನಾಟಕ ರಾಜ್ಯವು ಜಾಗತಿಕ ಉತ್ಪಾದನಾ ಕ್ಷೇತ್ರದಲ್ಲಿ ಪ್ರಮುಖ ಪಾತ್ರ ವಹಿಸಿದೆ. ರಾಷ್ಟ್ರದ ಅಭಿವೃದ್ಧಿಯ ಸರ್ವ ಕ್ಷೇತ್ರಗಳಲ್ಲಿ ರಾಜ್ಯದ ಕೊಡುಗೆ ಅಪೂರ್ವವಾಗಿದೆ ಎಂದರು. ಕಲ್ಯಾಣ ಹಾಗೂ ಲಿಂಗ ಸಮಾನತೆಯ ಹಾದಿಯತ್ತ ಕರ್ನಾಟಕ, ಸರ್ವರ ಏಳಿಗೆ ಬಯಸುವ ಸಮರ್ಥ ಸಾರ್ವಜನಿಕ ಶಿಕ್ಷಣ, ಸಮಗ್ರ ಆರೋಗ್ಯ-ಸುದೃಢ ಕರ್ನಾಟಕ, ಜನಸ್ನೇಹಿ ಆಡಳಿತ ಸೇರಿದಂತೆ ಒಟ್ಟು ಒಂಭತ್ತು ಆರ್ಥಿಕ ಪ್ರಮೇಯಗಳನ್ನು ಆಧಾರವಾಗಿಟ್ಟುಕೊಂಡು, ನಾಡಿನ ಅಭಿವೃದ್ಧಿ ರಥವನ್ನು ಸರ್ಕಾರ ಮುನ್ನಡೆಸುತ್ತಿದೆ ಎಂದರು.

<><><>

**ಮುಖ್ಯಮಂತ್ರಿ ಸಿದ್ದರಾಮಯ್ಯ ಧ್ವನಿ 41 ಸೆಕೆಂದುಗಳು**

<><><>

**ತಮ್ಮ ಬಜೆಟ್ ಭಾಷಣದಲ್ಲಿ, ರಾಜ್ಯದ ಹಣಕಾಸು ಪರಿಸ್ಥಿತಿಯ** ಬಗ್ಗೆ ಮಾಹಿತಿ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯವು ರಾಜಸ್ವ ಸಂಗ್ರಹಣೆಯಲ್ಲಿ ಸ್ಥಿರತೆ ಸಾಧಿಸಿದೆ. ಈ ಹಿಂದಿನ ವರ್ಷದ ರಾಜಸ್ವ ಸಂಗ್ರಹಕ್ಕಿಂತ ಈ ಬಾರಿ ಶೇಕಡ 3 ರಷ್ಟು ಹೆಚ್ಚಳವಾಗಿದೆ. ರಾಜ್ಯದ ಜಿ.ಎಸ್.ಡಿ.ಪಿ ಯು 2025-26 ನೇ ಸಾಲಿನಲ್ಲಿ ಶೇಕಡ 8 ದಶಾಂಶ 1 ರಷ್ಟು ನೈಜ ಬೆಳವಣಿಗೆಯನ್ನು ದಾಖಲಿಸಿದೆ ಎಂದರು. 2026-27 ಸಾಲಿನಲ್ಲಿ, ಗ್ರಾಮೀಣಾಭಿವೃದ್ಧಿಗೆ 26 ಸಾವಿರದ 559 ಕೋಟಿ ರೂಪಾಯಿ, ಕೃಷಿ ಮತ್ತು ತೋಟಗಾರಿಕೆ ಇಲಾಖೆಯಡಿ ವಿವಿಧ ಯೋಜನೆಗಳಿಗೆ 8 ಸಾವಿರದ 372 ಕೋಟಿ ರೂಪಾಯಿ ಮೀಸಲಿಡಲಾಗಿದೆ. ಮೇಕೆದಾಟು ಯೋಜನೆಯ ವಿಸ್ತೃತ ಯೋಜನೆ ವರದಿಯನ್ನು ಶೀಘ್ರದಲ್ಲಿಯೇ ತಯಾರಿಸಲಾಗುವುದು ಎಂದರು.

<><><>

**ರಾಜ್ಯದಲ್ಲಿ ನವೋದ್ಯಮ ಸಂಸ್ಕೃತಿಯ** ಉತ್ತೇಜನಕ್ಕಾಗಿ ಸ್ಟಾರ್ಟ್ ಅಪ್ ಉತ್ಕೃಷ್ಟತಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು, ಕಲ್ಯಾಣ ಕರ್ನಾಟಕದ ಶೈಕ್ಷಣಿಕ ಅಭಿವೃದ್ಧಿಗೆ ಒತ್ತು ನೀಡಲಾಗುವುದು, 5 ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗುವುದು ಎಂದು ಮುಖ್ಯಮಂತ್ರಿಯವರು ತಮ್ಮ ಬಜೆಟ್ ಭಾಷಣದಲ್ಲಿ ತಿಳಿಸಿದರು.

<><><>

**ಬಜೆಟ್ ಮಂಡನೆಯ ನೇರ ಪ್ರಸಾರವನ್ನು,** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮೂಲಕ, ಬೆಂಗಳೂರು ಮೂಲದ ವೃತ್ತಿ ಮೀಡಿಯಾ ಸಲ್ಯೂ ’ನ್ಸ್ ಸಂಸ್ಥೆಯ ಸಹಭಾಗಿತ್ವದಲ್ಲಿ, ರಾಜ್ಯಾದ್ಯಂತ ಇರುವ 230 ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಅಳವಡಿಸಿರುವ, ಡಿಜಿಟಲ್ ಡಿಸ್‌ಪ್ಲೇ ಹಾಗೂ ಎಲ್.ಇ.ಡಿ ಟಿವಿ ಪರದೆಗಳ ಮೂಲಕ ಮಾಡಲಾಯಿತು.

<><><>

**ವಿಜಯಪುರ ಜಿಲ್ಲೆ ಸೇರಿದಂತೆ,** ರಾಜ್ಯದ ಕೆಲ ಜಿಲ್ಲೆಗಳಲ್ಲಿ ಮುಂದಿನ ಆರು ದಿನಗಳ ಕಾಲ ಬಿಸಿಗಾಳಿಯ ಪ್ರಭಾವ ಕಂಡು ಬರುವ ಸಾಧ್ಯತೆ ಇದ್ದು, ಸಾರ್ವಜನಿಕರು ವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ನೀಡಲಾದ ಸೂಚನೆಗಳನ್ನು ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಡಾಕ್ಟರ ಕೆ.ಆನಂದ ತಿಳಿಸಿದ್ದಾರೆ. ಬಿಸಿಲಿನಿಂದ ಉಂಟಾಗುವ ಬಳಲಿಕೆ ಹಾಗೂ ನಿರ್ಜಲೀಕರಣ ಸಮಸ್ಯೆ ಹಾಗೂ ಉಷ್ಣಾಘಾತ ತಡೆಗಟ್ಟಲು ಸಾಕಷ್ಟು ನೀರು ಕುಡಿಯಬೇಕು, ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಹೊರ ಹೋಗುವುದನ್ನು ತಪ್ಪಿಸಬೇಕು ಎಂದು ತಿಳಿಸಿದ್ದಾರೆ.

<><><>

**ದೇಶದಲ್ಲಿ 2030 ರ ವೇಳೆಗೆ, ಬಾಲ್ಯ ವಿವಾಹ** ಮುಕ್ತ ಸಮಾಜ ನಿರ್ಮಾಣ ಮಾಡುವ ಉದ್ದೇಶದಿಂದ, ಬಳ್ಳಾರಿಯಲ್ಲಿ ಆಯೋಜಿತ 100 ದಿನಗಳ ‘ಬಾಲ್ಯವಿವಾಹ ಮುಕ್ತ ಭಾರತ’ ಧ್ಯೇಯದ, ಜನ ಜಾಗೃತಿ ರಥಯಾತ್ರೆಗೆ ಲೋಕಸಭಾ ಸದಸ್ಯ ಈ. ತುಕಾರಾಂ ಚಾಲನೆ ನೀಡಿದರು.

<><><>

**ಬೆಂಗಳೂರು, ಕೆಂಪೇಗೌಡ ಅಂತರಾಷ್ಟ್ರೀಯ** ವಿಮಾನ ನಿಲ್ದಾಣವು, 2025 ರ ವಿಮಾನ ನಿಲ್ದಾಣಗಳ ಸೇವಾ ಗುಣಮಟ್ಟ–ASQ ವಿಭಾಗದಲ್ಲಿ, ’ಜಾಗತಿಕವಾಗಿ ಆಗಮನದಲ್ಲಿ ಅತ್ಯುತ್ತಮ ವಿಮಾನ ನಿಲ್ದಾಣ’ ಎಂದು ಸ್ಥಾನ ಪಡೆದಿರುವುದು ಕರ್ನಾಟಕಕ್ಕೆ ಹೆಮ್ಮೆಯ ಕ್ಷಣವಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ತಮ್ಮ ಎಕ್ಸ್ ಖಾತೆ ತಿಳಿಸಿದ್ದಾರೆ.

<><><>

**ಕಲಬುರಗಿಯ ಚಂದ್ರಶೇಖರ ಪಾಟೀಲ** ಕ್ರೀಡಾಂಗಣದಲ್ಲಿ ಜರಗುತ್ತಿರುವ, ಅಂತಾರಾಷ್ಟ್ರೀಯ ಟೆನಿಸ್ ಫೆಡರೇಶನ್, ಐಟಿಎಫ್ ಪಂದ್ಯಾವಳಿಯ, ಡಬಲ್ಸ್ ವಿಭಾಗದಲ್ಲಿ ಭಾರತದ ಸೋನಲ್ ಪಾಟೀಲ್ ಹಾಗೂ ಬೇಲಾ ತಾಂಹನಕರ್ ಜೋಡಿ ಸೆಮಿಫೈನಲ್ ಪ್ರವೇಶಿಸಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>